ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳು

614(775): ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ಎಲ್ಲಾ ಕಾಲೇಜುಗಳು ಹಾಗೂ ಸರ್ಕಾರಿ ಸಮಾರಂಭಗಳಲ್ಲಿ ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆ ಹಾಡುವುದನ್ನು ಕಡ್ಡಾಯಗೊಳಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಕಡ್ಡಾಯಗೊಳಿಸಲಾಯಿತು;

ಇ) ಈಗಿನ ನಾಡಗೀತೆ 44 ಸಾಲುಗಳಿಂದ ಕೂಡಿದ್ದು, ಇದನ್ನು ಹಾಡಲು 1.5 ನಿಮಿಷ ಸಮಯ ತೆಗೆದುಕೊಳ್ಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ನಾಡಗೀತೆಯನ್ನು ಪರಿಷ್ಕರಿಸಿ, ಕಡಿಮೆ ಅವಧಿಯಲ್ಲಿ ಹಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ನಾಡಗೀತೆಯನ್ನು ಶಾಲಾ, ಕಾಲೇಜುಗಳು ಹಾಗೂ ಸರ್ಕಾರಿ ಸಮಾರಂಭಗಳಲ್ಲಿ ಕಡ್ಡಾಯವಾಗಿ ಹಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಪರಿಷ್ಕರಿಸಿದ ಕಡಿಮೆ ಅವಧಿಯ ನಾಡಗೀತೆಯನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು.

ಆ) ದಿನಾಂಕ: 7-1-2004 ರಿಂದ.

ಇ) ಹೌದು.

ಈ) ನಾಡೋಜ ಡಾ॥ ಚನ್ನವೀರ ಕಣವಿ ಅವರ ಅಧ್ಯಕ್ಷತೆಯ ಸಮಿತಿಯು ನಾಡಗೀತೆಯ ಪಠ್ಯವನ್ನು ಒಂದು ನಿಮಿಷ ಮೂವತ್ತು ಸೆಕೆಂಡಿನಲ್ಲಿ ಹಾಡಲು ಮತ್ತು ಒಂದು ಪಲ್ಲವಿ ಹಾಗೂ ಎರಡು ಪದ್ಯ ಬಂಧಗಳಿಗೆ ಸಂಕ್ಷಿಪ್ತಗೊಳಿಸುವಂತೆ ಶಿಫಾರಸ್ಸು ಮಾಡಿದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಉ) ಇಲ್ಲ.

ಊ) ಸರ್ಕಾರದ ಪರಿಶೀಲನೆಯಲ್ಲಿದೆ.

ಪತ್ರಕರ್ತರಿಗೆ ಮಾಸಿಕ ಪಿಂಚಣಿ

615(776): ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ರಾಜ್ಯದಲ್ಲಿರುವ ಪತ್ರಕರ್ತರ ಸಂಖ್ಯೆ ಎಷ್ಟು;

ಆ) ಸಂಕಷ್ಟದಲ್ಲಿರುವ ಪತ್ರಕರ್ತರನ್ನು ಗುರುತಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಇವರಿಗೆ ಮಾಸಿಕ ಪಿಂಚಣಿ ನೀಡಲಾಗುತ್ತಿದೆಯೇ;

ಈ) ಇಲ್ಲಿಯವರೆಗೆ ಎಷ್ಟು ಜನ ಪತ್ರಕರ್ತರಿಗೆ ಮಾಸಿಕ ಪಿಂಚಣಿ ನೀಡಲಾಗಿದೆ;

ಉ) ಪತ್ರಕರ್ತರ ಮಾಸಿಕ ಪಿಂಚಣಿಯನ್ನು ಹೆಚ್ಚಿಸಲಾಗಿದೆಯೇ;

ಊ) ಹಾಗಿದ್ದಲ್ಲಿ, ಎಷ್ಟು ಮೊತ್ತದ ಮಾಸಿಕ ಪಿಂಚಣಿ ನೀಡಲಾಗುತ್ತಿದೆ?

ಶ್ರೀ ಆರ್.ರೋಷನ್‌ಬೇಗ್ (ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು)

ಅ) ರಾಜ್ಯದಲ್ಲಿರುವ ಪತ್ರಕರ್ತರ ಸಂಖ್ಯೆ ಕುರಿತ ಅಂಕಿ ಅಂಶಗಳು ಲಭ್ಯವಿರುವುದಿಲ್ಲ. ವಾರ್ತಾ ಇಲಾಖೆ ವತಿಯಿಂದ ರಾಜ್ಯದಲ್ಲಿ ಮಾನ್ಯತೆ ಪಡೆದ 1337 ಪತ್ರಕರ್ತರು ಇದ್ದಾರೆ.